ಅಧ್ಯಕ್ಷರು: ಪ್ರಸ್ತಾವ ಏನೆಂದರೆ, '19 ರ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ'ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ವಾರ್ತಾ ಮತ್ತು ಪ್ರಚಾರ ಮಂತ್ರಿ): ಮಾನ್ಯ ಅಧ್ಯಕ್ಷರೇ, '1997ರ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ'ವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: **ವಿಧೇಯಕವನ್ನು ಮಂಡಿಸಲಾಗಿದೆ.**

(ಆ) ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕ, 1997

ಅನುಮತಿ ಮಂಡನೆ ಕೋರಿಕೆ

ಶ್ರೀ ಸಿದ್ದರಾಮಯ್ಯ (ಉಪಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1997ರ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ '1997ರ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕ'ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು.

ಶ್ರೀ ಸಿದ್ಧರಾಮಯ್ಯ (ಉಪ ಮುಖ್ಯಮಂತ್ರಿಗಳು): ಮಾನ್ಯ ಅಧ್ಯಕ್ಷರೇ, 1997ರ ಕರ್ನಾಟಕ ತೆರಿಗೆ ಕಾನೂನುಗಳ (ಎರಡನೇ ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: **ವಿಧೇಯಕವನ್ನು ಮಂಡಿಸಲಾಗಿದೆ.**

(ಇ) ಕರ್ನಾಟಕ ವಿಧಾನಮಂಡಲದ ವೇತನಗಳ, ನಿವೃತ್ತಿ, ವೇತನಗಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 1997.

(ಅನುಮತಿ ಮಂಡನೆ ಕೋರಿಕೆ)

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು, ಹಾಗೂ ವಾರ್ತಾ ಮತ್ತು ಪ್ರಚಾರ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, '1997ನೇ ಸಾಲಿನ

---

* ಅನುಬಂಧ I - II

ಕರ್ನಾಟಕ ವಿಧಾನಮಂಡಲದವರ ವೇತನಗಳ, ನಿವೃತ್ತಿ, ವೇತನಗಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ'ವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿಯನ್ನು ಕೋರುತ್ತೇನೆ.

ಅಧ್ಯಕ್ಷರು: ಪ್ರಸ್ತಾವ ಏನೆಂದರೆ '1997ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳ, ನಿವೃತ್ತಿ ವೇತನಗಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ'ವನ್ನು ಮಂಡಿಸಲು ಅನುಮತಿ ನೀಡುವುದು.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಚಾರ ಮಂತ್ರಿಗಳು): ಮಾನ್ಯ ಅಧ್ಯಕ್ಷರೇ, '1997ನೇ ಸಾಲಿನ ಕರ್ನಾಟಕ ವಿಧಾನ ಮಂಡಲದವರ ವೇತನಗಳ, ನಿವೃತ್ತಿ ವೇತನಗಳ ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ'ವನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಅಧ್ಯಕ್ಷರು: ★★ವಿಧೇಯಕವನ್ನು ಮಂಡಿಸಲಾಗಿದೆ.★★

(ಬಿ) ವಿಧೇಯಕಗಳನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು

(ಅ) ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕ, 1997 ಪರ್ಯಾಲೋಚನಾ ಪ್ರಸ್ತಾವ

ಶ್ರೀ ಎಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಹಾಗೂ ವಾರ್ತಾ ಮತ್ತು ಪ್ರಚಾರ ಮಂತ್ರಿ): ಮಾನ್ಯ ಅಧ್ಯಕ್ಷರೇ, 1997ರ ಕರ್ನಾಟಕ ಸಚಿವರ ವೇತನಗಳು ಮತ್ತು ಭತ್ಯೆಗಳ (ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವನೆಯನ್ನು ಮಂಡಿಸಲಾಯಿತು.

ಶ್ರೀ ಎಂ.ಸಿ.ನಾಣಯ್ಯ: ಮಾನ್ಯ ಅಧ್ಯಕ್ಷರೇ, ಇದೊಂದು ಸರಳವಾಗಿರತಕ್ಕಂಥ ತಿದ್ದುಪಡಿ. ಇದರಲ್ಲಿ ಇವತ್ತಿನ ಬೆಲೆಯೇರಿಕೆಗೆ ಅನುಗುಣವಾಗಿ ಸ್ವಲ್ಪ ಮಟ್ಟಿಗೆ ನಮ್ಮ ಮಂತ್ರಿಗಳಿಗೆ ಕೊಡಬೇಕಾದಂಥ ಅಲೋಯೆನ್ಸ್ ಯಾವುದು ಇದೆ, ಅದನ್ನು ಸ್ವಲ್ಪಮಟ್ಟಿಗೆ ಏರಿಸಬೇಕು ಎಂದು ನಾವು ತೀರ್ಮಾನ ಮಾಡಿದ್ದೇವೆ. ಇದಕ್ಕೆ ಕಾರಣ ಏನೆಂದರೆ ಅಲ್ಲಿ ಪಾರ್ಲಿಮೆಂಟ್‌ನಲ್ಲಿ ಕೂಡ ಇದರ ಬಗ್ಗೆ ಚರ್ಚೆಗೆ ಬಂದಾಗ, ಪಾರ್ಲಿಮೆಂಟಿನ ಸಭಾಧ್ಯಕ್ಷರುಗಳು ಈಗ ಇರತಕ್ಕಂಥ ಈ ಸಾರಿಗೆ ಭತ್ಯ ಯಾವುದಿದೆ,

---

★ ಅನುಬಂಧ III